## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿ, ಶಿವಮೊಗ್ಗಕ್ಕೆ 2019-20ನೇ ಸಾಲಿನ ಮೊದಲನೇ ಕಂತಿನ ಅನುದಾನ ಬಿಡುಗಡೆ ಮಾಡುವ ಬಗ್ಗೆ.

**ಓದಲಾಗಿದೆ:**
1. ಸರ್ಕಾರಿ ಆದೇಶ ಸಂಖ್ಯೆ:ಪಿಡಿ 02 ಪಿಎಸ್‌ಡಿ 2019, ದಿನಾಂಕ:10.04.2019.
2. ಕಾರ್ಯದರ್ಶಿ, ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿ, ಶಿವಮೊಗ್ಗ ಇವರ ಪತ್ರ ಸಂಖ್ಯೆ:ಮಪ್ರಮಂ:ಶಿ:ಅನುದಾನ:2019-20/28.ದಿನಾಂಕ:29.04.2019

*******

**ಪ್ರಸ್ತಾವನೆ**

ಮೇಲೆ ಓದಲಾದ ಕ್ರಮಸಂಖ್ಯೆ (1)ರ ಸರ್ಕಾರಿ ಆದೇಶದಲ್ಲಿ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆಯ ಅಧೀನದಲ್ಲಿ ಬರುವ ವಿವಿಧ ಇಲಾಖೆ/ಸಂಸ್ಥೆ/ಮಂಡಳಿ/ಪ್ರಾಧಿಕಾರಗಳಿಗೆ ಸಂಬಂಧಿಸಿದಂತೆ ಯೋಜನಾ ಕಾರ್ಯಕ್ರಮಗಳನ್ನು 2019-20ನೇ ಸಾಲಿಗೆ ಮುಂದುವರೆಸಲಾಗಿದೆ. 2019-20ನೇ ಸಾಲಿನ ಆಯವ್ಯಯದಲ್ಲಿ ಮಲೆನಾಡು ಪ್ರದೇಶ ಅಭಿವೃದ್ಧಿ ಮಂಡಳಿಗೆ ಈ ಕೆಳಕಂಡಂತೆ ಅನುದಾನವನ್ನು ವಿವಿಧ ಶೀರ್ಷಿಕೆಗಳಡಿ ಹಂಚಿಕೆ ಮಾಡಲಾಗಿರುತ್ತದೆ.

| ಕ್ರಮ ಸಂಖ್ಯೆ | ಲೆಕ್ಕಶೀರ್ಷಿಕೆ | ರೂ. ಲಕ್ಷಗಳಲ್ಲಿ |
|---|---|---|
| 1 | 2515-00-103-0-02-101 (ಸಹಾಯಾನುದಾನ) | 88.00 |
| 2 | 4515-00-800-0-03-132 (ಬಂಡವಾಳ ವೆಚ್ಚಗಳು) | 2008.00 |
| 3 | 4515-00-800-0-03-422 (ಪರಿಶಿಷ್ಟ ಜಾತಿ ಉಪಯೋಜನೆ) | 460.00 |
| 4 | 4515-00-800-0-03-423 (ಗಿರಿಜನ ಉಪಯೋಜನೆ) | 186.00 |
| | ಒಟ್ಟು | **2742.00** |

ಮೇಲೆ ಓದಲಾದ ಕ್ರಮ ಸಂಖ್ಯೆ(2)ರಲ್ಲಿನ ಪತ್ರದಲ್ಲಿ ಕಾರ್ಯದರ್ಶಿ, ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿ, ಶಿವಮೊಗ್ಗ ಇವರು 2019-20ನೇ ಸಾಲಿನ ಆಡಳಿತ ವೆಚ್ಚಗಳು ಹಾಗೂ ಮಂಡಳಿಯ ಕಾಮಗಾರಿಗಳ ಪ್ರಗತಿಗಳಿಗನುಗುಣವಾಗಿ ಬಿಲ್ಲುಗಳನ್ನು ಇತ್ಯರ್ಥಪಡಿಸಲು ಹಾಗೂ ಮಂಡಳಿಯ ಆಡಳಿತ ವೆಚ್ಚ/ವೇತನಕ್ಕೆ ಅನುಕೂಲವಾಗುವಂತೆ 2019-20ನೇ ಸಾಲಿನ ಪ್ರಥಮ ಕಂತಿನ ಅನುದಾನವನ್ನು ಬಿಡುಗಡೆ ಮಾಡುವಂತೆ ಕೋರಿರುತ್ತಾರೆ.

. . . 2

ಪ್ರಸ್ತಾವನೆಯನ್ನು ಪರಿಶೀಲಿಸಿದ ಸರ್ಕಾರವು ಮಂಡಳಿಗೆ ಪ್ರಥಮ ಕಂತಿನ ಅನುದಾನ ಬಿಡುಗಡೆ ಮಾಡಲು ಉದ್ದೇಶಿಸಿದೆ. ಅದರಂತೆ ಈ ಆದೇಶ.

**ಸರ್ಕಾರಿ ಆದೇಶ ಸಂಖ್ಯೆ:ಯೋಇ 30 ಮಪ್ರಮಂ 2019, ಬೆಂಗಳೂರು, ದಿನಾಂಕ:03.05.2019**

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ, ಮಲೆನಾಡು ಪ್ರದೇಶ ಅಭಿವೃದ್ಧಿ ಮಂಡಳಿ-ಶಿವಮೊಗ್ಗ ಇವರಿಗೆ 2019-20ನೇ ಸಾಲಿನ ಮೊದಲನೇ ಕಂತಿನ ಅನುದಾನವನ್ನು ಈ ಕೆಳಗಿನಂತೆ ವಿವಿಧ ಲೆಕ್ಕಶೀರ್ಷಿಕೆಗಳಡಿ ಬಿಡುಗಡೆ ಮಾಡಿದೆ.

| ಕ್ರ ಸಂ. | ಲೆಕ್ಕಶೀರ್ಷಿಕೆ | ಮೊತ್ತ (ರೂ.ಲಕ್ಷಗಳಲ್ಲಿ) |
|---|---|---|
| 1 | 2515-00-103-0-02-101 (ಸಹಾಯಾನುದಾನ) | 22.00 |
| 2 | 4515-00-800-0-03-132 (ಬಂಡವಾಳ ವೆಚ್ಚಗಳು) | 502.00 |
| 3 | 4515-00-800-0-03-422 (ಪರಿಶಿಷ್ಟ ಜಾತಿ ಉಪ ಯೋಜನೆ) | 115.00 |
| 4 | 4515-00-800-0-03-423 (ಗಿರಿಜನ ಉಪ ಯೋಜನೆ) | 46.50 |
| | ಒಟ್ಟು | **685.50** |

(ಆರುನೂರ ಎಂಭತ್ತೈದು ಲಕ್ಷದ ಐವತ್ತು ಸಾವಿರ ರೂಪಾಯಿಗಳು ಮಾತ್ರ)

**ಷರತ್ತುಗಳು:**

1. ಬಿಡುಗಡೆಯಾದ ಈ ಅನುದಾನವನ್ನು ಮಂಡಳಿಯ ಬ್ಯಾಂಕ್ ಖಾತೆಗೆ ಜಮೆ ಮಾಡಿ, ನಂತರ ಅವಶ್ಯಕತೆಗನುಗುಣವಾಗಿ ಅನುಮೋದಿತ ಕಾಮಗಾರಿಗಳಿಗೆ ಮಾತ್ರ ನಿಯಮಾನುಸಾರ ಖರ್ಚು ಮಾಡತಕ್ಕದ್ದು.

2. ಮಂಡಳಿಯ ಬ್ಯಾಂಕ್ ಖಾತೆಯಲ್ಲಿ ಲಭ್ಯವಿರುವ ಅನುದಾನ ಮತ್ತು ಈ ಆದೇಶದಲ್ಲಿ ಬಿಡುಗಡೆ ಮಾಡಿರುವ ಅನುದಾನದ ಶೇಕಡ 75 ರಷ್ಟನ್ನು ವೆಚ್ಚ ಭರಿಸಿ ಹಣಬಳಕೆ ಪ್ರಮಾಣಪತ್ರದೊಂದಿಗೆ 2ನೇ ಕಂತಿನ ಅನುದಾನ ಬಿಡುಗಡೆಗೆ ಪ್ರಸ್ತಾವನೆ ಸಲ್ಲಿಸತಕ್ಕದ್ದು.

ಈ ಆದೇಶವನ್ನು ಸರ್ಕಾರಿ ಆದೇಶ ಸಂಖ್ಯೆ: ಎಫ್‌ಡಿ 01 ಟಿಎಫ್‌ಪಿ 2019, ದಿನಾಂಕ:03.04.2019ರಲ್ಲಿ ಸರ್ಕಾರದ ಆಡಳಿತ ಇಲಾಖೆಯ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಲಾಗಿರುವ ಆರ್ಥಿಕ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಬಿ.ಎನ್.ಸುಮತಿ.)
ಸರ್ಕಾರದ ಅಧೀನ ಕಾರ್ಯದರ್ಶಿ, 1&2,
ಯೋಜನೆ, ಕಾರ್ಯಕ್ರಮ ಸಂಯೋಜನೆ
ಮತ್ತು ಸಾಂಖ್ಯಿಕ ಇಲಾಖೆ.

**ಇವರಿಗೆ:**

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ.

3. ಕಾರ್ಯದರ್ಶಿ, ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿ, ಶಿವಮೊಗ್ಗ.
4. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
5. ಜಿಲ್ಲಾ ಖಜಾನಾಧಿಕಾರಿಗಳು, ಶಿವಮೊಗ್ಗ ಜಿಲ್ಲೆ, ಶಿವಮೊಗ್ಗ.

**ಪ್ರತಿ:**

1. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
2. ಸರ್ಕಾರದ ಕಾರ್ಯದರ್ಶಿ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
3. ನಿರ್ದೇಶಕರು, ಎಡಿಬಿ ವಿಭಾಗ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ.
4. ಶಾಖಾಧಿಕಾರಿ, ಸ್ಕೀಮರ ಶಾಖೆ, ಯೋಜನಾ ಇಲಾಖೆ.(ಕಾಂಪೆಂಡಿಯಮ್‌ಗೋಸ್ಕರ)
5. ಶಾಖಾರಕ್ಷಾ ಕಡತ/ಹೆಚ್ಚುವರಿ ಪ್ರತಿ/

* ********